ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 30/5/2020

# ಶಾಸಕರ ವೇತನ, ಭತ್ಯೆ ಶೇ 30ರಷ್ಟು ಕಡಿತ

30-5-2020. ಪ್ರ.ವಾ.

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೋವಿಡ್-19 ಹಿನ್ನೆಲೆಯಲ್ಲಿ ಮುಖ್ಯಮಂತ್ರಿ, ಎಲ್ಲ ಸಚಿವರು, ಶಾಸಕರು, ಸಭಾಪತಿ ಮತ್ತು ಸಭಾಧ್ಯಕ್ಷರ ವೇತನ ಕಡಿತ ಹಾಗೂ ಕೆಲವು ಭತ್ಯೆಗಳಲ್ಲಿ ಶೇ 30ರಷ್ಟು ಕಡಿತ ಮಾಡಲು ಸರ್ಕಾರ ನಿರ್ಧರಿಸಿದೆ.

ಕೊರೊನಾ ತಡೆ ಕಾರ್ಯಾಚರಣೆಗೆ ಬೇಕಾದ ಸಂಪನ್ಮೂಲ ಕ್ರೋಢೀಕರಣಕ್ಕೆ ಚುನಾಯಿತ ಪ್ರತಿನಿಧಿಗಳ ವೇತನದಲ್ಲಿ ಕಡಿತ ಮಾಡಲು ಸರ್ಕಾರ ಚಿಂತನೆ ನಡೆಸಿತ್ತು. ಈ ಕುರಿತು ಅಭಿಪ್ರಾಯ ನೀಡುವಂತೆ ಆರ್ಥಿಕ ಇಲಾಖೆಗೆ ಸೂಚಿಸಿತ್ತು. ಇಲಾಖೆ ನೀಡಿದ ಅಭಿಪ್ರಾಯ ಆಧರಿಸಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಈ ಸಂಬಂಧ ಆದೇಶ ಹೊರಡಿಸಿದೆ.

ಕರ್ನಾಟಕ ವಿಧಾನಮಂಡಲ ಸದಸ್ಯರ ವೇತನ, ಪಿಂಚಣಿ, ಮತ್ತು ಇತರ ಭತ್ಯೆಗಳ ಕಾನೂನು ತಿದ್ದುಪಡಿ ಸುಗ್ರೀವಾಜ್ಞೆ 2020ರ ಉಪಬಂಧ ಅನುಸಾರ ಸಂಬಳ, ದೂರವಾಣಿ ವೆಚ್ಚ, ಕ್ಷೇತ್ರ ಭತ್ಯೆ, ಅಂಚೆ ವೆಚ್ಚ, ಕೊಠಡಿ ಸೇವಕರ ಭತ್ಯೆ, ನಿಗದಿತ ವಿಮಾನ ಮತ್ತು ರೈಲ್ವೆ ಪ್ರಯಾಣ ಭತ್ಯೆ-(ವಾರ್ಷಿಕ) ಇವುಗಳಲ್ಲಿ ಶೇ 30 ಕಡಿತ ಮಾಡಲಾಗುವುದು.

ಸಭೆಗಳಿಗೆ ಹಾಜರಾಗಲು ನೀಡುವ ದಿನಭತ್ಯೆ (ರಾಜ್ಯದೊಳಗೆ ಮತ್ತು ರಾಜ್ಯದ ಹೊರಗೆ), ಪ್ರಯಾಣ ಭತ್ಯೆ, ವಾಹನ ಭತ್ಯೆ (ಪ್ರತಿ ಕಿ.ಮೀ.ಗೆ) ಇವುಗಳನ್ನು ಕಡಿತಗೊಳಿಸುವುದಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ.